ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜ್ಯಪಾಲರು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 10/07/2019

# ಪ್ರಮುಖ ನಿರ್ಧಾರ ಬೇಡ ಸಿಎಸ್‌ಗೆ ರಾಜ್ಯಪಾಲ ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ರಾಜಕೀಯ ಅಸ್ಥಿರತೆ ಇರುವುದರಿಂದ ಮಂತ್ರಿ ಮಂಡಲದ ಕಡೆಯಿಂದ ಪ್ರಮುಖ ನೀತಿ ನಿರ್ಧಾರ ಕೈಗೊಳ್ಳದಂತೆ ಎಚ್ಚರ ವಹಿಸಬೇಕೆಂದು ಮುಖ್ಯ ಕಾರ್ಯದರ್ಶಿಗೆ ರಾಜ್ಯಪಾಲರು ಸೂಚಿಸಿದ್ದಾರೆ ಎಂದು ಗೊತ್ತಾಗಿದೆ.



ಸೋಮವಾರ ಮಧ್ಯಾಹ್ನ ಸಿಎಂ ಎಚ್.ಡಿ.ಕುಮಾರಸ್ವಾಮಿ ಮಂಡ್ಯದ ಮೈಷುಗರ್ ಕಾರ್ಖಾನೆ ಸಂಬಂಧ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯದರ್ಶಿ ಅವರನ್ನು ರಾಜಭವನಕ್ಕೆ ಕರೆಸಿಕೊಂಡ ರಾಜ್ಯಪಾಲರು, "ಆಡಳಿತ ಪಕ್ಷಗಳ 13 ಶಾಸಕರು ರಾಜೀನಾಮೆ ಸಲ್ಲಿಸಿದ್ದಾರೆ. ಇಬ್ಬರು ಪಕ್ಷೇತರರೂ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದಾಗಿ ಮಾಹಿತಿ ನೀಡಿದ್ದಾರೆ. ಹಾಗಾಗಿ ಈ ಸರಕಾರ ಅಲ್ಪಮತಕ್ಕೆ ಕುಸಿದಿರುವ ಸಾಧ್ಯತೆಯಿದೆ. ರಾಜಕೀಯವಾಗಿ ಇಂತಹ ಸೂಕ್ಷ್ಮ ಪರಿಸ್ಥಿತಿ ಇರುವಾಗ ಸಿಎಂ ಅಥವಾ ಸಚಿವರು ಮಹತ್ವದ ತೀರ್ಮಾನ ಪ್ರಕಟಿಸುವ ಸಂಬಂಧ ಸಭೆ ನಡೆಸುವುದು ಉಚಿತವಲ್ಲ. ಶಾಸಕರ ರಾಜೀನಾಮೆ ಪ್ರಕರಣ ಇತ್ಯರ್ಥವಾಗುವ ವರೆಗೂ ಎಚ್ಚರಿಕೆಯಿಂದ ಇರಬೇಕು," ಎಂಬ ನಿರ್ದೇಶನ ಕೊಟ್ಟಿದ್ದಾರೆ ಎನ್ನಲಾಗಿದೆ.

"ಜಲ ನಿರ್ವಹಣೆ ಕುರಿತಂತೆ ತುರ್ತಾಗಿ ಆಗಬೇಕಾದ ಕೆಲಸಗಳ ಬಗ್ಗೆ ನಿಮ್ಮ ಹಂತದಲ್ಲಿ ತೀರ್ಮಾನ ಕೈಗೊಂಡು ರಾಜಭವನಕ್ಕೆ ಮಾಹಿತಿ ನೀಡಬೇಕು. ಅದರ ಹೊರತಾಗಿ ಭಾರಿ ಯೋಜನೆ ಇನ್ನಿತರ ವಿಚಾರಗಳಿಗೆ ಅನುಮೋದನೆ ನೀಡುವಂತಿಲ್ಲ," ಎಂಬ ಸೂಚನೆ ಕೊಟ್ಟಿದ್ದಾರೆಂದು ತಿಳಿದು ಬಂದಿದೆ.